ಕ್ರ.ಸಂ. ೨೦.

**ವಿಧಾನ ಪರಿಷತ್ತು ಸದಸ್ಯರಾದ ಮಾನ್ಯ ಶ್ರೀ ಎಂ. ನಾಗರಾಜು ರವರು ಮಂಡಿಸಿರುವ ಶೂನ್ಯ ವೇಳೆಯ ಸೂಚನೆಗೆ ಉತ್ತರ**

---

ವಿಷಯ: ದಿನಾಂಕ:14.02.2023 (ಮಂಗಳವಾರ)ರ ವಿಜಯ ಕರ್ನಾಟಕ ದಿನಪತ್ರಿಕೆಯಲ್ಲಿ " ರಸ್ತೆ ದಾಟಲು ಪಾದಚಾರಿಗಳಿಗೆ ಭಯ " ಎಂಬ ವಿಚಾರವು ವರದಿಯಾಗಿರುತ್ತದೆ.

ಬೆಂಗಳೂರು ನಗರ ಸಂಚಾರ ಪೊಲೀಸರು ಜನವರಿ ತಿಂಗಳಲ್ಲಿ ದಾಖಲಾಗಿರುವ 433 ಅಪಘಾತ ಪ್ರಕರಣಗಳನ್ನು ಅವಲೋಕಿಸಿದಾಗ ಬೆಂಗಳೂರಿನಲ್ಲಿ ಕೆಲವು ವಾಹನ ಸವಾರರ ಅತಿವೇಗ ಹಾಗೂ ನಿರ್ಲಕ್ಷ್ಯದ ವಾಹನ ಚಾಲನೆ ಪರಿಣಾಮ ಒಂದೇ ತಿಂಗಳಲ್ಲಿ 25 ಮಂದಿ ಪಾದಚಾರಿಗಳು ಮೃತರಾಗಿದ್ದು, 88 ಮಂದಿ ಗಂಭೀರ ಗಾಯಗೊಂಡಿರುತ್ತಾರೆ ಮತ್ತು ಉಳಿದ ಪ್ರಕರಣಗಳಲ್ಲಿ 300ಕ್ಕೂ ಅಧಿಕ ಮಂದಿ ಗಾಯಗೊಂಡಿರುವ ಆಘಾತಕಾರಿ ಸಂಗತಿ ಹೊರಬಿದ್ದಿದೆ. ರಾತ್ರಿ ವೇಳೆ ಪಾದಚಾರಿಗಳು ರಸ್ತೆ ದಾಟುವಾಗ ಮತ್ತು ಸಿಗ್ನಲ್ ಕ್ರಾಸ್ ಮಾಡುವಾಗ ಅಪಘಾತಗಳಿಗೆ ಹೆಚ್ಚು ಬಲಿಯಾಗಿದ್ದಾರೆ. ಸಂಚಾರ ತಜ್ಞರು ಈ ಅಪಘಾತಗಳಿಗೆ ಹದಗೆಟ್ಟಿರುವ ಫುಟ್‌ಪಾತ್‌ಗಳೇ ಕಾರಣ, ಅನಿವಾರ್ಯವಾಗಿ ಸಾರ್ವಜನಿಕರು ಫುಟ್‌ಪಾತ್‌ಗಳನ್ನು ಬಿಟ್ಟು ರಸ್ತೆಯಲ್ಲಿ ಸಂಚರಿಸಲು ಪ್ರಾರಂಭಿಸುವುದರಿಂದ ಈ ಅಪಘಾತಗಳು ಸಂಭವಿಸುತ್ತಿದೆಯೆಂದು ಮತ್ತು ಇದನ್ನು ತಡೆಗಟ್ಟಲು ನಗರದಲ್ಲಿ ಹದಗೆಟ್ಟಿರುವ ಶೇಕಡ 92% ಫುಟ್‌ಪಾತ್‌ಗಳನ್ನು ದುರಸ್ತಿಗೊಳಿಸಿ ಮತ್ತು ಫುಟ್‌ಪಾತ್‌ಗಳಲ್ಲಿ ವಾಹನಗಳ ಪಾರ್ಕಿಂಗ್‌ಗೆ ಕಡಿವಾಣ ಹಾಕಿ ಸಾರ್ವಜನಿಕರು ಇವುಗಳನ್ನು ಸಮರ್ಪಕವಾಗಿ ಬಳಸುವಂತೆ ಮಾಡಿದ್ದಲ್ಲಿ ಅಪಘಾತಗಳಿಂದಾಗುತ್ತಿರುವ ಸಾವು-ನೋವುಗಳನ್ನು ತಪ್ಪಿಸಬಹುದಾಗಿದೆ ಎಂಬ ಅಭಿಪ್ರಾಯವನ್ನು ವ್ಯಕ್ತಪಡಿಸಿರುತ್ತಾರೆ.

ಬೆಂಗಳೂರು ನಗರದಲ್ಲಿ ಸಂಭವಿಸುತ್ತಿರುವ ಅಪಘಾತಗಳನ್ನು ತಡೆಯುವ ನಿಟ್ಟಿನಲ್ಲಿ ಸರ್ಕಾರ ಕೂಡಲೇ ಕ್ರಮಕೈಗೊಂಡು ಫುಟ್‌ಪಾತ್‌ಗಳನ್ನು ದುರಸ್ತಿಗೊಳಿಸಿ ಮತ್ತು ಫುಟ್‌ಪಾತ್‌ಗಳಲ್ಲಿ ವಾಹನಗಳ ಪಾರ್ಕಿಂಗ್ ಕಡಿವಾಣ ಹಾಕಿ ಸಾರ್ವಜನಿಕರು ಇವುಗಳನ್ನು ಸರ್ಮಪಕವಾಗಿ ಬಳಸುವಂತೆ ಮಾಡಬೇಕೆಂದು ಮಾನ್ಯ ಮುಖ್ಯಮಂತ್ರಿಗಳಲ್ಲಿ ಒತ್ತಾಯಿಸುತ್ತೇನೆ. "

ಉತ್ತರ : ಬೆಂಗಳೂರು ನಗರ ಸಂಚಾರ ವಿಭಾಗದಿಂದ ಅಪಘಾತಗಳನ್ನು ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲಾಗುತ್ತಿದ್ದು, ಅಪಘಾತಗಳನ್ನು ತಡೆಗಟ್ಟುವ ದೃಷ್ಟಿಯಿಂದ ಕೈಗೊಂಡಿರುವ ಕ್ರಮಗಳ ವಿವರಗಳು ಈ ಕೆಳಕಂಡಂತಿರುತ್ತದೆ.

**ಅಪಘಾತಗಳನ್ನು ನಿಯಂತ್ರಣ ಮಾಡುವ ನಿಟ್ಟಿನಲ್ಲಿ ಕೈಗೊಂಡಿರುವ ಸುರಕ್ಷತಾ ಕ್ರಮಗಳು :**

- ಸಂಚಾರ ನಿಯಮ ಉಲ್ಲಂಘನೆ ಮಾಡುವವರ ವಿರುದ್ಧ ಪ್ರವರ್ತನ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಮಾಡುವ ನಿಟ್ಟಿನಲ್ಲಿ ಗುರಿಯನ್ನು ನಿಗದಿಪಡಿಸಿ ಕ್ರಮಕೈಗೊಳ್ಳಲಾಗುತ್ತಿರುತ್ತದೆ.
- ಶಾಲಾ/ಕಾಲೇಜು ಮಕ್ಕಳಿಗೆ ಸಂಚಾರ ನಿಯಮಗಳು ಮತ್ತು ಅವುಗಳ ಪಾಲನೆಯ ಮಹತ್ವ ಹಾಗೂ ರಸ್ತೆ ಸುರಕ್ಷತೆ ಬಗ್ಗೆ ತಿಳುವಳಿಕೆ ನೀಡುವ ಕಾರ್ಯಕ್ರಮವನ್ನು ನಿರಂತರವಾಗಿ ಹಮ್ಮಿಕೊಂಡಿದ್ದು, ಈ ಮೂಲಕ ರಸ್ತೆ ಅಪಘಾತಗಳನ್ನು ತಡೆಗಟ್ಟಲು ಕ್ರಮಕೈಗೊಂಡಿದೆ.
- ಆಟೋ ಚಾಲಕರ ಸಂಘ & ಸರಕು ಸಾಗಣೆ ವಾಹನಗಳ ಚಾಲಕರ ಸಂಘ, ಖಾಸಗಿ ಕಂಪನಿಗಳ ವಾಹನಗಳ ಚಾಲಕರುಗಳನ್ನು ಹಾಗೂ ಬಿ.ಎಂ.ಟಿ.ಸಿ. ಬಸ್ ಡಿಪೋಗೆ ಭೇಟಿ ನೀಡಿ ಸಭೆ ನಡೆಸಿ ರಸ್ತೆ ಸುರಕ್ಷತೆಯ ಬಗ್ಗೆ ಅರಿವು ಮೂಡಿಸಲಾಗುತ್ತಿದೆ.
- ಸಾರ್ವಜನಿಕರಿಗೆ ಹಾಗೂ ವಾಹನ ಚಾಲಕರಿಗೆ ರಸ್ತೆ ನಿಯಮಗಳನ್ನು ಪಾಲಿಸುವಂತೆ ಜಾಗೃತಿ ಮೂಡಿಸಲಾಗುತ್ತಿರುತ್ತದೆ.

- ಪಾದಚಾರಿಗಳು ಎಲ್ಲೆಂದರಲ್ಲಿ ರಸ್ತೆ ದಾಟದ ಹಾಗೆ ಸೆಂಟರ್ ಮೀಡಿಯನ್ ಮೇಲೆ ಎತ್ತರದ ಗ್ರಿಲ್ ಹಾಕುವ ಕುರಿತು ಸಂಬಂಧಪಟ್ಟ ಇಲಾಖೆಯೊಂದಿಗೆ ಪತ್ರ ವ್ಯವಹಾರ ನಡೆಸಲಾಗಿದೆ.

- ಇಂಟರ್‌ಸೆಪ್ಟರ್ ವಾಹನಗಳನ್ನು ಬಳಸಿಕೊಂಡು ಅತಿ ವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡುವ ಚಾಲಕ/ಸವಾರರುಗಳ ವಿರುದ್ಧ ಕ್ರಮಕೈಗೊಳ್ಳಲಾಗುತ್ತಿರುತ್ತದೆ.

- ರಸ್ತೆಯಲ್ಲಿ ಎಲ್ಲೆಂದರಲ್ಲಿ ನಿಲುಗಡೆಯಾಗುತಿದ್ದ ವಾಹನಗಳನ್ನು ತೆರವುಗೊಳಿಸಿ ವಾಹನಗಳು ಸುಗಮವಾಗಿ ಓಡಾಡಲು ಅನುವು ಮಾಡಿಕೊಡಲಾಗಿದೆ. ಈ ಮೂಲಕ ರಸ್ತೆ ಅಪಘಾತಗಳನ್ನು ಕಡಿಮೆ ಮಾಡಲು ಕ್ರಮಕೈಗೊಂಡಿದೆ.

- ರಸ್ತೆ ಅಪಘಾತಗಳ ವೈಜ್ಞಾನಿಕ ತನಿಖೆಯನ್ನು ಜಂಟಿಯಾಗಿ ನಡೆಸಲು, ಆರ್.ಟಿ.ಓ ಅಧಿಕಾರಿಗಳು ಹಾಗೂ ಬಿ.ಬಿ.ಎಂ.ಪಿ ಅಧಿಕಾರಿಗಳೊಂದಿಗೆ ತನಿಖೆಯನ್ನು ಮಾಡಿ ಅಪಘಾತಗಳಿಗೆ ವೈಜ್ಞಾನಿಕ ಕಾರಣಗಳನ್ನು ಕಂಡುಕೊಳ್ಳಲು ಕ್ರಮ ಕೈಗೊಳ್ಳಲಾಗುತ್ತಿದೆ.

- ವಾಹನಗಳ ವೇಗವನ್ನು ನಿಯಂತ್ರಿಸಲು ರಸ್ತೆ ವೈಜ್ಞಾನಿಕ ರಸ್ತೆ ಉಬ್ಬುಗಳನ್ನು ನಿರ್ಮಿಸಲು ಬಿ.ಬಿ.ಎಂ.ಪಿ ಸಹಯೋಗದೊಂದಿಗೆ ಕ್ರಮ ಕೈಗೊಳ್ಳಲಾಗುತ್ತಿದೆ.

- ಪಾದಾಚಾರಿಗಳ ಸುರಕ್ಷತೆಗಾಗಿ ಬಿ.ಬಿ.ಎಂ.ಪಿ ಸಹಯೋಗದೊಂದಿಗೆ ಹೊಸದಾಗಿ ಪಾದಚಾರಿ ರಸ್ತೆಗಳನ್ನು ನಿರ್ಮಿಸಿ, ಪಾದಚಾರಿ ರಸ್ತೆಗೆ ಗ್ರಿಲ್‌ಗಳನ್ನು ಅಳವಡಿಸಿ, ಸ್ಕೈವಾಕ್ ನಿರ್ಮಿಸಿ ರಸ್ತೆ ಅಪಘಾತಗಳನ್ನು ಕಡಿಮೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

- ಸಂಚಾರ ಪೊಲೀಸ್ ಠಾಣಾ ಸರಹದ್ದಿನಲ್ಲಿ ಪದೇ ಪದೇ ಅಪಘಾತ ಸಂಭವಿಸುವ ಒಟ್ಟು 63 ಬ್ಲಾಕ್‌ಸ್ಪಾಟ್‌ಗಳನ್ನು ಗುರುತಿಸಲಾಗಿದ್ದು, ಸದರಿ ಬ್ಲಾಕ್‌ಸ್ಪಾಟ್‌ಗಳಲ್ಲಿ ರಸ್ತೆ ಅಪಘಾತಗಳಿಗೆ ಸಾಮಾನ್ಯ ಕಾರಣಗಳು ಏನು ಎಂಬುದನ್ನು ಪರಿಶೀಲನೆ ಮಾಡಿದ್ದು, ಈ ಕಾರಣಗಳಿಗೆ ಪರಿಹಾರ ಹುಡುಕಿ ಅಪಘಾತಗಳನ್ನು ತಡೆಗಟ್ಟಲು ಕ್ರಮ ಕೈಗೊಳ್ಳಲಾಗುತ್ತಿದೆ.

- ವಿವಿಧ ಮಾದರಿಯ ವಾಹನಗಳ ಚಾಲಕರು/ಸವಾರರಿಗೆ ಸಂಚಾರ ನಿಯಮಗಳು ಮತ್ತು ಅವುಗಳ ಪಾಲನೆಯ ಮಹತ್ವವನ್ನು ತಿಳಿಸಲು ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಆ ಮೂಲಕ ಸಂಚಾರ ನಿಯಮಗಳ ಬಗ್ಗೆ ಅರಿವು ಮೂಡಿಸಿ ರಸ್ತೆ ಅಪಘಾತಗಳನ್ನು ಕಡಿಮೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

- ಸಾರ್ವಜನಿಕರು ತಮ್ಮ ದಿನ ನಿತ್ಯದ ಓಡಾಟಕ್ಕೆ ಸಾರ್ವಜನಿಕ ಸಾರಿಗೆಗಳಾದ ಬಿ.ಎಂ.ಟಿ.ಸಿ, ಕೆ.ಎಸ್.ಆರ್.ಟಿ.ಸಿ ಬಸ್ಸುಗಳು, ಮೆಟ್ರೋ ರೈಲುಗಳನ್ನು ಹೆಚ್ಚಾಗಿ ಬಳಸುವಂತೆ ತಿಳುವಳಿಕೆ ಮೂಡಿಸುವ ಮತ್ತು ಅದಕ್ಕಾಗಿ ಪ್ರಚಾರಗಳನ್ನು ಕೈಗೊಂಡು ವಾಹನ ದಟ್ಟಣೆಯನ್ನು ಕಡಿಮೆಮಾಡಿ ರಸ್ತೆ ಅಪಘಾತಗಳನ್ನು ನಿಯಂತ್ರಣಕ್ಕೆ ತರಲು ಕ್ರಮ ಕೈಗೊಳ್ಳಲಾಗುತ್ತಿದೆ.

- ದ್ವಿಚಕ್ರ ವಾಹನ ಸವಾರರು ಗುಣಮಟ್ಟದ ಹೆಲ್ಮೆಟ್ ಧರಿಸುವಂತೆ ಮತ್ತು ವಾಹನಗಳನ್ನು ಸುರಕ್ಷಿತವಾಗಿ ಚಾಲನೆ ಮಾಡುವ ಬಗ್ಗೆ ತಿಳುವಳಿಕೆ ನೀಡಲು ಕ್ರಮಕೈಗೊಳ್ಳಲಾಗಿರುತ್ತದೆ.

- ಪ್ರಿಂಟ್ ಮತ್ತು ಎಲೆಕ್ಟ್ರಾನಿಕ್ ಮಾಧ್ಯಮಗಳ ಮೂಲಕ ಸಂಚಾರ ನಿಯಮಗಳ ಪಾಲನೆಯ ಮಹತ್ವ ಮತ್ತು ರಸ್ತೆ ಸುರಕ್ಷತೆ ಕುರಿತು ಅರಿವನ್ನು ಮೂಡಿಸಿ ರಸ್ತೆ ಅಪಘಾತಗಳ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ.

- ಠಾಣಾ ಸರಹದ್ದುಗಳಲ್ಲಿ ಉಂಟಾಗಿರುವ ರಸ್ತೆಗುಂಡಿಗಳನ್ನು ಪಟ್ಟಿ ಮಾಡಿ ಸರಿಪಡಿಸಿ ಕೊಡುವಂತೆ ಬಿ.ಬಿ.ಎಂ.ಪಿ.ಗೆ ಮನವಿ ಮಾಡಲಾಗಿದ್ದು, ಈ ಮೂಲಕ ಸಂಭವನೀಯ ರಸ್ತೆ ಅಪಘಾತಗಳನ್ನು ನಿಯಂತ್ರಿಸಲು ಸತತವಾಗಿ ಪ್ರಯತ್ನಿಸಲಾಗುತ್ತಿದೆ.

- ಬ್ಲಾಕ್‌ಸ್ಪಾಟ್‌ಗಳಲ್ಲಿ ರಸ್ತೆ ಅಪಘಾತಗಳನ್ನು ತಡೆಯುವ ಉದ್ದೇಶದಿಂದ ಆಗಬೇಕಾಗಿರುವ ಕಾಮಗಾರಿಗಳ ವಿವರವನ್ನು ಪಟ್ಟಿಮಾಡಿ ಸಂಬಂಧಪಟ್ಟ ಇಲಾಖೆಗೆ ನೀಡಲಾಗಿದೆ.

- ಹೆಚ್ಚು ರಸ್ತೆ ಅಪಘಾತಗಳು ಸಂಭವಿಸುವ ಸ್ಥಳಗಳಲ್ಲಿ 2 ಪಾಳಿಯಲ್ಲಿ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ವಾಹನಗಳ ಸುಗಮ ಸಂಚಾರ ನಿರ್ವಹಣೆ ಕರ್ತವ್ಯಕ್ಕೆ ನೇಮಿಸಿ ಕ್ರಮಕೈಗೊಳ್ಳಲಾಗಿದೆ.

- ಬಿ.ಬಿ.ಎಂ.ಪಿ.ಯ ಸಹಯೋಗದೊಂದಿಗೆ ಸೆಂಟರ್ ಮೀಡಿಯನ್‌ಗಳನ್ನು ನಿರ್ಮಿಸುವ ಮೂಲಕ ವಾಹನಗಳ ಸಂಘರ್ಷಣೆಯನ್ನು ನಿಯಂತ್ರಿಸಿ ರಸ್ತೆ ಅಪಘಾತಗಳನ್ನು ನಿಯಂತ್ರಿಸಲು ಕ್ರಮಕೈಗೊಳ್ಳಲಾಗುತ್ತಿದೆ.

- ಬೀದಿ ದೀಪಗಳು ಸರಿಯಿಲ್ಲದೇ ಇರುವ ಸ್ಥಳಗಳು ಮತ್ತು ಹೊಸದಾಗಿ ಬೀದಿ-ದೀಪಗಳ ಅವಶ್ಯಕತೆ ಇರುವ ಸ್ಥಳಗಳನ್ನು ಪಟ್ಟಿಮಾಡಿ ಸರಿಪಡಿಸಲು ಮತ್ತು ಹೊಸದಾದ ಬೀದಿ-ದೀಪಗಳನ್ನು ಅಳವಡಿಸಲು ಬೆಸ್ಕಾಂನೊಂದಿಗೆ ಪತ್ರ ವ್ಯವಹಾರ ಮಾಡಲಾಗಿರುತ್ತದೆ.

- ಜೀಬ್ರಾ ಕ್ರಾಸಿಂಗ್‌ಗೆ ಬಣ್ಣ ಬಳಿಸಲು ಸ್ಥಳಗಳನ್ನು ಪಟ್ಟಿಮಾಡಿ ಬಿ.ಬಿ.ಎಂ.ಪಿ.ಗೆ ನೀಡಿದ್ದು ಅದರ ಸಹಯೋಗದೊಂದಿಗೆ ಜೀಬ್ರಾ ಕ್ರಾಸಿಂಗ್‌ಗೆ ಬಣ್ಣ ಬಳಿಸಲಾಗುತ್ತಿದೆ.

- ಸಂಜೆ ವೇಳೆಯಲ್ಲಿ ಸೈಕಲ್ ಬಳಸುವ ಮಕ್ಕಳಿಗೆ ಆಟವಾಡುವ ಸಮಯದಲ್ಲಿ ರಿಫ್ಲೆಕ್ಟೀವ್ ಬಟ್ಟೆಗಳನ್ನು ಧರಿಸುವ ಬಗ್ಗೆ ಅರಿವನ್ನು ಮೂಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

- ಬಿ.ಎಂ.ಟಿ.ಸಿ/ಕೆ.ಎಸ್.ಆರ್.ಟಿ.ಸಿ ಬಸ್ ಚಾಲಕರಿಗೆ ಸಂಸ್ಥೆಯ ವಾಹನಗಳಿಂದ ಉಂಟಾಗುತ್ತಿರುವ ಹೆಚ್ಚಿನ ಸಂಖ್ಯೆಯ ಅಪಘಾತಗಳ ಕುರಿತು ತಿಳುವಳಿಕೆ ನೀಡಿ ಸಂಚಾರ ನಿಯಮಗಳ ಪಾಲನೆಯ ಮಹತ್ವ ಮತ್ತು ರಸ್ತೆ ಸುರಕ್ಷತೆ ಕುರಿತು ತಿಳುವಳಿಕೆ ಮೂಡಿಸಲು ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಕ್ರಮ ಕೈಗೊಳ್ಳಲಾಗುತ್ತಿದೆ.

- ದ್ವಿಚಕ್ರ ವಾಹನಗಳು ಮತ್ತು ಆಟೋ ರಿಕ್ಷಾಗಳು ಫ್ಲೈಓವರ್ ಮೇಲೆ ಸಂಚರಿಸದಂತೆ ನಿಷೇಧವಿರುವ ಫಲಕಗಳನ್ನು ಹಾಕಲಾಗಿದ್ದು, ಕಡ್ಡಾಯವಾಗಿ ದ್ವಿಚಕ್ರ ವಾಹನಗಳು ಮತ್ತು ಆಟೋರಿಕ್ಷಾ ಚಾಲಕರುಗಳು ಫ್ಲೈಓವರ್ ಮೇಲೆ ಸಂಚರಿಸದಂತೆ ತಿಳುವಳಿಕೆ ಮೂಡಿಸಿ ಕ್ರಮ ಕೈಗೊಳ್ಳಲಾಗುತ್ತಿದೆ.

- ಅಪಘಾತಗಳ ನಿಯಂತ್ರಣಕ್ಕಾಗಿ ಮದ್ಯಪಾನ ಮಾಡಿ ವಾಹನ ಚಾಲನೆ ಹೆಲ್ಮೆಟ್ ರಹಿತ ಚಾಲನೆ, ಹಾಗೂ ಇನ್ನಿತರೆ ಗುಣಾತ್ಮಕ ಕೇಸುಗಳ ಬಗ್ಗೆ ವಿಶೇಷ ಕಾರ್ಯಾಚರಣೆಯನ್ನು ಹಮ್ಮಿಕೊಂಡು ಕಾಲ ಕಾಲಕ್ಕೆ ದಾಖಲು ಮಾಡಿ ಅಪಘಾತ ನಿಯಂತ್ರಣ ಮಾಡಲಾಗುತ್ತಿದೆ.

- ➢ ವಾಹನಗಳ ವೇಗವನ್ನು ನಿಯಂತ್ರಿಸಲು ರಂಬ್ಲರ್ ಸ್ಟ್ರಿಪ್ಸ್‌ಗಳನ್ನು ಹಾಕುವ ಬಗ್ಗೆ ಎನ್.ಹೆಚ್.ಎ.ಐ ಅಧಿಕಾರಿಗಳಿಗೆ ಮನವಿ ಮಾಡಲಾಗಿರುತ್ತದೆ.

- ➢ ರಸ್ತೆಯ ಬದಿಗಳಲ್ಲಿ ಬೆಳೆದು ನಿಂತಿರುವ ಮರದ ಕೊಂಬೆಗಳನ್ನು ತೆರವುಗೊಳಿಸಿ ವಾಹನ ಸವಾರ/ಚಾಲಕರಿಗೆ ರಸ್ತೆಯು ಸ್ಪಷ್ಟವಾಗಿ ಗೋಚರಿಸುವಂತೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

- ➢ ಅಪಘಾತಗಳ ಕಾರಣವನ್ನು ತಿಳಿಯಲು ಮತ್ತು ನಿಯಂತ್ರಿಸಲು ಬಿ.ಬಿ.ಎಂ.ಪಿ. ಸಾರಿಗೆ ಇಲಾಖೆಯೊಂದಿಗೆ ಜಂಟಿ ಪರಿವೀಕ್ಷಣೆ ಮಾಡಿ ಅಪಘಾತಗಳನ್ನು ವೈಜ್ಞಾನಿಕವಾಗಿ ಅಭ್ಯಸಿಸಿ ಅಪಘಾತಗಳ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ.

- ➢ ಸಂಚಾರಿ ವಾರ್ಡನ್ ಸಂಸ್ಥೆಯು ಬೆಂಗಳೂರು ನಗರ ಸಂಚಾರ ಪೊಲೀಸರಿಗೆ ರಸ್ತೆ ಸುರಕ್ಷತೆ ಮತ್ತು ಸಂಚಾರ ನಿಯಂತ್ರಣ ಚಟುವಟಿಕೆಯಲ್ಲಿ ಅವಿರತವಾಗಿ ಸಹಾಯವನ್ನು ಮಾಡುವಲ್ಲಿ ಶ್ರಮಿಸುತ್ತಿದ್ದು, ಈ ಸಂಸ್ಥೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಸ್ವಯಂ ಪ್ರೇರಿತರಾಗಿ ಟ್ರಾಫಿಕ್ ವಾರ್ಡನ್ ಸೇವೆಗೆ ಸೇರಲು ಇಚ್ಛಿಸುವವರಿಗೆ ಠಾಣಾ ಮಟ್ಟದಲ್ಲಿ ಹೆಸರನ್ನು ನೊಂದಾಯಿಸುವ ಬಗ್ಗೆ ಕ್ರಮಕೈಗೊಳ್ಳಲಾಗಿದೆ.

- ➢ ನಗರದ ವಿವಿಧ ಪ್ರಮುಖ ಶಾಲೆಗಳ ಮುಂಭಾಗ ನಿರಂತರವಾಗಿ ನಿಲ್ಲುತ್ತಿದ್ದ ಶಾಲಾ ವಾಹನಗಳನ್ನು ಶಾಲೆಯ ಕಾಂಪೌಂಡ್‌ನ ಒಳಗಡೆ ಕಳುಹಿಸಲು ಮತ್ತು ನಿಯಂತ್ರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

- ➢ ಪರಿಷ್ಕೃತ ದಂಡವನ್ನು ಜಾರಿಗೆ ತಂದ ನಂತರ ಸಂಚಾರ ಉಲ್ಲಂಘನೆಯ ಪ್ರಕರಣಗಳು ಕ್ರಮೇಣವಾಗಿ ಕಡಿಮೆಯಾಗುತ್ತಿದ್ದು, ಮುಂದಿನ ದಿನಗಳಲ್ಲಿ ರಸ್ತೆ ಸುರಕ್ಷತೆಯ ಬಗ್ಗೆ ಹೆಚ್ಚಿನ ಆದ್ಯತೆ ನೀಡಲಾಗುವುದು.

- ➢ 12 ಹೈಡೆನ್ಸಿಟಿ ಕಾರಿಡಾರ್‌ಗಳನ್ನು ಗುರುತಿಸಿದ್ದು, ಸುಗಮ ಸಂಚಾರಕ್ಕೆ ಕೈಗೊಳ್ಳಬೇಕಾದ ಕಾಮಗಾರಿಗಳ ಬಗ್ಗೆ ನೀಲನಕ್ಷೆಯನ್ನು ರೂಪಿಸಲಾಗುತ್ತಿದೆ.

- ➢ ಸಿ.ಬಿ.ಡಿ. ಏರಿಯಾವನ್ನು ವಿಸ್ತಾರಗೊಳಿಸಿ ಆದ್ಯತೆಯ ಮೇರೆಗೆ ರಸ್ತೆ ಸುರಕ್ಷತೆ ಮತ್ತು ಸುಗಮ ಸಂಚಾರದ ದೃಷ್ಟಿಯಿಂದ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಅಧ್ಯಯನ ನಡೆಸಲಾಗುತ್ತಿದೆ.

ಬೆಂಗಳೂರು ನಗರ ಸಂಚಾರ ವಿಭಾಗದಿಂದ ಪಾದಚಾರಿಗಳ ಸುರಕ್ಷತಾ ಹಿತದೃಷ್ಟಿಯಿಂದ ಪಾದಚಾರಿ ರಸ್ತೆಗಳಲ್ಲಿ ಅನಧಿಕೃತವಾಗಿ ವಾಹನ ನಿಲುಗಡೆ ಮಾಡಿ ಸಂಚಾರ ನಿಯಮ ಉಲ್ಲಂಘನೆ ಮಾಡುತ್ತಿರುವವರ ವಿರುದ್ಧ ಮೋಟಾರು ವಾಹನ ಕಾಯ್ದೆ ರೀತ್ಯಾ ಪ್ರಕರಣಗಳನ್ನು ದಾಖಲಿಸಿ ಕ್ರಮ ಕೈಗೊಳ್ಳಲಾಗುತ್ತಿದ್ದು, ಕಳೆದ 3 ವರ್ಷಗಳಲ್ಲಿ ಪಾದಚಾರಿ ರಸ್ತೆ ಮೇಲೆ ಅನಧಿಕೃತವಾಗಿ ವಾಹನಗಳನ್ನು ನಿಲುಗಡೆ ಮಾಡಿರುವವರ ವಿರುದ್ಧ ದಾಖಲು ಮಾಡಿರುವ ಪ್ರಕರಣಗಳ ವಿವರ ಈ ಕೆಳಕಂಡಂತಿರುತ್ತದೆ.

| ವರ್ಷ | ದಾಖಲು ಮಾಡಿರುವ ಪ್ರಕರಣಗಳು |
|---|---|
| 2020 | 45455 |
| 2021 | 74851 |
| 2022 | 153983 |
| 2023 | 8352 |

ಪಾದಚಾರಿಗಳು ಪಾದಚಾರಿ ಮಾರ್ಗದಲ್ಲಿಯೇ ಸಂಚರಿಸುವ ಬಗ್ಗೆ ಪ್ರತಿಯೊಂದು ಜಂಕ್ಷನ್‌ಗಳಲ್ಲಿ ಕರ್ತವ್ಯ ನಿರ್ವಹಿಸುವ ಸಿಬ್ಬಂದಿಗಳು ಅರಿವು ಮೂಡಿಸುವ ಕಾರ್ಯವು ಪ್ರಗತಿಯಲ್ಲಿದ್ದು, ಮುಂದಿನ ದಿನಗಳಲ್ಲಿಯೂ ಸಹ ಪಾದಚಾರಿ ರಸ್ತೆಗಳ ಮೇಲೆ ಅನಧಿಕೃತವಾಗಿ ವಾಹನಗಳನ್ನು ನಿಲುಗಡೆ ಮಾಡಿ ಪಾದಚಾರಿಗಳಿಗೆ ತೊಂದರೆಯನ್ನುಂಟು ಮಾಡುತ್ತಿರುವವರ ವಿರುದ್ಧ ಮೋಟಾರು ವಾಹನ ಕಾಯ್ದೆ ರೀತ್ಯಾ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತಿದೆ.

---

ಹೆಚ್‌ಡಿ 78 ಎಸ್‌ಎಸ್‌ಟಿ 2023

(ಆರಗ ಜ್ಞಾನೇಂದ್ರ)
ಗೃಹ ಸಚಿವರು